## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ವಿಧಾನ ಪರಿಷತ್ ಸದಸ್ಯರ ಹೆಸರು: | ಡಾ: ಕೆ.ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 2345 |
| ಉತ್ತರಿಸಬೇಕಾದ ದಿನಾಂಕ: | 21-03-2022 |
| ಉತ್ತರಿಸುವ ಸಚಿವರು: | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ಒಬ್ಬ ವಿದ್ಯಾರ್ಥಿ ಎಂ.ಬಿ.ಬಿ.ಎಸ್ ಪದವಿ ಶಿಕ್ಷಣವನ್ನು ಮುಗಿಸಲು ತಗುಲುವ ಖರ್ಚು ಎಷ್ಟು; (ಸರ್ಕಾರ ಅನುದಾನಿತ, ಖಾಸಗಿ ವರ್ಷಾವಾರು ಪ್ರತ್ಯೇಕ ಶುಲ್ಕದ ಸಂಪೂರ್ಣ ಮಾಹಿತಿಯನ್ನು ನೀಡುವುದು) | ಎಂಬಿಬಿಎಸ್ ಪದವಿ ಶಿಕ್ಷಣವನ್ನು ಮುಗಿಸಲು ತಗುಲುವ ಶುಲ್ಕದ ಮಾಹಿತಿಯನ್ನು ಅನುಬಂಧ-01ರಲ್ಲಿ ಲಗತ್ತಿಸಿದೆ. |
| ಆ) | ರಾಜ್ಯದಲ್ಲಿ ಬಡ, ಮಧ್ಯಮ ವರ್ಗದ ವಿದ್ಯಾರ್ಥಿಗಳ ಎಂ.ಬಿ.ಬಿ.ಎಸ್ ಪದವಿ ಶಿಕ್ಷಣ ಪಡೆಯುವುದು ದುಬಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶುಲ್ಕ ಕಡಿಮೆಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ ಬಡ, ಮಧ್ಯಮ ವರ್ಗದ ವಿದ್ಯಾರ್ಥಿಗಳ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣವನ್ನು ಪಡೆಯುವುದು ದುಬಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಸರ್ಕಾರಿ ಖೋಟಾದಡಿ ಆಯ್ಕೆಯಾದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣದ ಶುಲ್ಕವು ರೂ.50,000/-, ಖಾಸಗಿ ವೈದ್ಯಕೀಯ ಕಾಲೇಜು/ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಆಯ್ಕೆಯಾದ ಸರ್ಕಾರಿ ಖೋಟಾದ ವಿದ್ಯಾರ್ಥಿಯು ಪಾವತಿಸಬೇಕಾದ ಶುಲ್ಕವು ರೂ.1,28,746/- ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಆಯ್ಕೆಯಾದ ವಿದ್ಯಾರ್ಥಿಯು ಪಾವತಿಸಬೇಕಾದ ಶುಲ್ಕವು ರೂ.9,81,956/-ಗಳಾಗಿರುತ್ತದೆ. ಕಳೆದ 02 ವರ್ಷಗಳಿಂದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣದ ಶುಲ್ಕವನ್ನು ಹೆಚ್ಚಳ ಮಾಡಿರುವುದಿಲ್ಲ ಹಾಗೂ ಎಸ್.ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಶಿಷ್ಯವೇತನವು ಕೂಡಾ ಲಭ್ಯವಿರುತ್ತದೆ. |
| ಇ) | ರಾಜ್ಯದಲ್ಲಿ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ದುಬಾರಿಯೇ; ರಷ್ಯಾ, ಉಕ್ರೇನ್ ನಂತಹ ದೇಶಗಳಿಗೆ ತೆರಳುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರಾಜ್ಯದ ಮತ್ತು ಈ ದೇಶಗಳಲ್ಲಿ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ಪೂರೈಸಲು ತಗಲುವ ಶುಲ್ಕದ ವ್ಯತ್ಯಾಸ ಎಷ್ಟು; | 2021-22ನೇ ಸಾಲಿಗೆ ಸಂಬಂಧಿಸಿದಂತೆ ರಾಜ್ಯದಲ್ಲಿನ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಸರ್ಕಾರಿ ಖೋಟಾದಡಿ ಆಯ್ಕೆಯಾದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣದ ಶುಲ್ಕವು ರೂ.50,000/-ಗಳಾಗಿರುತ್ತದೆ. ರಷ್ಯಾ, ಉಕ್ರೇನ್ ಹಾಗೂ ಇನ್ನಿತರೇ ದೇಶಗಳ ಶುಲ್ಕದ ಮಾಹಿತಿಯು ಲಭ್ಯವಿರುವುದಿಲ್ಲ. |

| | | |
|---|---|---|
| ಈ) | ರಾಜ್ಯದ ಆಸಕ್ತ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ಪೂರೈಸುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ರಾಜ್ಯದ ಶೈಕ್ಷಣಿಕ ವಾತಾವರಣವನ್ನು ವಿದ್ಯಾರ್ಥಿ ಆರ್ಥಿಕ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು? (ಮಾಹಿತಿ ನೀಡುವುದು) | ರಾಜ್ಯದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳ ಹಿತದೃಷ್ಟಿ ಹಾಗೂ ರಾಜ್ಯದ ಶೈಕ್ಷಣಿಕ ವಾತಾವರಣವನ್ನು ವಿದ್ಯಾರ್ಥಿಯ ಆರ್ಥಿಕ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಕಳೆದ 02 ವರ್ಷಗಳಿಂದ ಪ್ರವೇಶ ಶುಲ್ಕದಲ್ಲಿ ಯಾವುದೇ ಬದಲಾವಣೆಯನ್ನು ಮಾಡಿರುವುದಿಲ್ಲ. |

No: MED 37 RGU 2022

(ಡಾ.ಕೆ.ಸುಧಾಕರ್)

ವೈದ್ಯಕೀಯ ಶಿಕ್ಷಣ ಹಾಗೂ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಇಲಾಖಾ ಸಚಿವರು